ಕರ್ನಾಟಕ ಸರ್ಕಾರ

ವಾಣಿಜ್ಯ ತೆರಿಗೆಗಳ ಇಲಾಖೆ

**ವಾಣಿಜ್ಯ ತೆರಿಗೆ ಜಂಟಿ ಆಯುಕ್ತರ ಕಛೇರಿ (ಆಡಳಿತ)**
**ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5, ವಿಟಿಕೆ-2, ರಾಜೇಂದ್ರನಗರ,**
**80 ಅಡಿ ರಸ್ತೆ, ಕೋರಮಂಗಲ, ಬೆಂಗಳೂರು-560047**
**ದೂರವಾಣಿ: 080-25706157 ಫ್ಯಾಕ್ಸ್: 080-25706175**

---

ಸಂಖ್ಯೆ.ಜಂಆ(ಆ)/ವಿಸಸೇತೆಕ-5/ಪಿ.ಪಿಆರ್-7/2017-18 ದಿನಾಂಕ: 13-07-2017

**ಟೆಂಡರ್ ಅಧಿಸೂಚನೆ**

ವಿಷಯ: ವಾಣಿಜ್ಯ ತೆರಿಗೆ ಇಲಾಖೆಯಲ್ಲಿನ ಈ ವಿಭಾಗದ ವಿವಿಧ ಕಚೇರಿಗಳಿಗೆ ಸಾಮಾನ್ಯ ಟೆಂಡರ್ ಪ್ರಕ್ರಿಯೆ ಮುಖೇನ ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 139 ಶಿವಾನೀ 2004, ಬೆಂಗಳೂರು, ದಿನಾಂಕ: 12-09-2006.
2. ಸುತ್ತೋಲೆ ಸಂಖ್ಯೆ.ವಿಹೆಚ್‌ಟಿ/ಸಿಆರ್-20/2013-14 ದಿನಾಂಕ: 30-09-2014.
3. ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರು (ಕ), ಬೆಂಗಳೂರು ರವರ ಪತ್ರ ಸಂಖ್ಯೆ: ವಿಹೆಚ್‌ಟಿ/ಸಿಆರ್-11/2017-18, ದಿನಾಂಕ: 04-07-2017.

-000-

1) ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ ಈ ವಿಭಾಗದಲ್ಲಿ ತೆರಿಗೆ ಸಂಗ್ರಹಣೆ ಕಾರ್ಯ ಮತ್ತು ಆಡಿಟ್ ಕೆಲಸಕಾರ್ಯಗಳನ್ನು ನಿರ್ವಹಿಸುವ ಅಧಿಕಾರಿಗಳ ಉಪಯೋಗಕ್ಕಾಗಿ ಬಾಡಿಗೆ ವಾಹನಗಳನ್ನು ಉಲ್ಲೇಖ(3)ರಂತೆ ಗರಿಷ್ಠ ಮಾಸಿಕ ಬಾಡಿಗೆ ರೂ.25,000-00ಗಳ ಮಿತಿಗೆ ಒಳಪಟ್ಟು ಗುತ್ತಿಗೆಯ ಆಧಾರದ ಮೇಲೆ ಪಡೆಯಲು ಮಾನ್ಯ ವಾಣಿಜ್ಯ ತೆರಿಗೆಗಳ ಆಯುಕ್ತರು ಅನುಮೋದಿಸಿರುತ್ತಾರೆ. ಆದ್ದರಿಂದ ಅರ್ಹತೆಯುಳ್ಳ ವಾಹನ ಮಾಲೀಕರೇ ಚಾಲಕರಾಗಿರುವ ವ್ಯಕ್ತಿಗಳು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಈ ಕೆಳಕಂಡ ನಿಬಂಧನೆಗಳಿಗೆ ಮತ್ತು ಷರತ್ತುಗಳಿಗೆ ಒಳಪಟ್ಟು ವಾಹನವನ್ನು ಒದಗಿಸಲು ಸೀಲ್ ಮಾಡಿದ ಲಕೋಟೆಯಲ್ಲಿ ಅರ್ಜಿಯನ್ನು ಖುದ್ದು ಸಲ್ಲಿಸಬಹುದಾಗಿದೆ. ಆಸಕ್ತ ಒಬ್ಬ ವಾಹನ ಮಾಲೀಕ/ಚಾಲಕರು ಒಂದು ವಾಹನದ ಸೇವೆಗೆ ಮಾತ್ರ ಅರ್ಜಿಯನ್ನು ಸಲ್ಲಿಸುವುದು. ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 96 ಶೀವಾನಿ 2012, ದಿನಾಂಕ: 23.08.2012ರಲ್ಲಿ ತಿಳಿಸಿರುವ ನಿಯಮಗಳನ್ವಯ ವರ್ಷ **2013 ಮತ್ತು ನಂತರದ ಮಾದರಿಯ** ಹಳದಿ ಬಣ್ಣದ ಬೋರ್ಡ್ ಹೊಂದಿರುವ ಟ್ಯಾಕ್ಸಿ ವಾಹನಗಳ ಸೇವೆಯನ್ನು ಮಾತ್ರ ಪರಿಗಣಿಸಲಾಗುವುದು.

1. **ಮುಚ್ಚಿದ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 26.07.2017 ಸಮಯ: 5 ಘಂಟೆಯವರೆಗೆ.**
2. **ಟೆಂಡರ್‌ಗಳನ್ನು ತೆರೆಯುವ ದಿನಾಂಕ: 27.07.2017**
3. **ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಅಂತಿಮ ಪಟ್ಟಿಯನ್ನು ಪ್ರಕಟಿಸುವ ದಿನಾಂಕ: 30.07.2017**
4. **ಟೆಂಡರ್‌ನ ಅವಧಿ: 01-08-2017 ರಿಂದ 31-07-2018.**

ಈ ವಿಭಾಗಕ್ಕೆ ಅವಶ್ಯಕತೆಯಿರುವ ಸ್ಥಳಗಳು ಮತ್ತು ವಾಹನಗಳ ಸಂಖ್ಯೆ ಈ ಕೆಳಗಿನಂತಿದೆ.

| | | | |
|---|---|---|---|
| 1. | ಬೆಂಗಳೂರು ನಗರದ ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5ರ ಕ್ಷೇತ್ರವ್ಯಾಪ್ತಿ | - | 14 |
| 2. | ದೊಡ್ಡಬಳ್ಳಾಪುರ | - | 01 |
| 3. | ಚಿಕ್ಕಬಳ್ಳಾಪುರ | - | 01 |

2) ವಾಹನದ ಪರವಾನಗಿಯ ದಿನಾಂಕ: 01-08-2017 ರಿಂದ 31-07-2018ರವರೆಗೆ ಚಾಲ್ತಿಯಲ್ಲಿ ಇರತಕ್ಕದ್ದು. ವಾಹನದ ಮಾಡೆಲ್ 2013 ಮತ್ತು ನಂತರದ ವರ್ಷದ ಮಾಡೆಲ್‌ಗಳು ಅರ್ಹವಾಗಿರುತ್ತವೆ. ಈ ವಿಭಾಗದ ಕಾರ್ಯವ್ಯಾಪ್ತಿಯ ಪ್ರದೇಶದ ಸುತ್ತಮುತ್ತಲಿನ ವಾಹನ ಚಾಲಕರುಗಳಿಗೆ, ಉತ್ತಮ ಸ್ಥಿತಿಯ ಮತ್ತು ಇತ್ತೀಚಿನ ಮಾಡೆಲ್ ವಾಹನಗಳಿಗೆ ಆದ್ಯತೆ ಕೊಡಲಾಗುವುದು.

3) ಈ ವಿಭಾಗದ ಮುಖ್ಯಸ್ಥರು ಕಛೇರಿಯ ಕೆಲಸ ಕಾರ್ಯಗಳಿಗೆ ಅನುಗುಣವಾಗಿ ತಕ್ಷಣಕ್ಕೆ ಲಭ್ಯವಿರುವ ವಾಹನವನ್ನು ಬಾಡಿಗೆಯ ಮೇಲೆ ತೆಗೆದುಕೊಳ್ಳುವ ಸಂದರ್ಭದಲ್ಲಿ ವಾಹನದ ಗುಣಮಟ್ಟವನ್ನು ಮತ್ತು ಚಾಲನಾ ಕೌಶಲ್ಯವನ್ನು ಪರೀಕ್ಷೆಗೆ ಒಳಪಡಿಸಲಾಗುವುದು. ಯಾವುದೇ ಕಾರಣ ನೀಡದೆ ವಾಹನವನ್ನು ಬದಲಿಸುವ ಇಲ್ಲವೇ ನಿರಾಕರಿಸುವ ಹಕ್ಕು ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5, ಬೆಂಗಳೂರು ರವರಿಗೆ ಇರುತ್ತದೆ.

4) ವಾಣಿಜ್ಯ ತೆರಿಗೆ ಇಲಾಖೆಯು ಅಗತ್ಯವಿರುವ ವಾಹನಗಳನ್ನು ಇ-ಟೆಂಡರ್ ಮುಖಾಂತರ ಬಾಡಿಗೆಗೆ ಪಡೆದುಕೊಳ್ಳಲು ಇರುವ ತಾಂತ್ರಿಕ ಅಡಚಣೆಗಳ ಕಾರಣದಿಂದ ಪರ್ಯಾಯವಾಗಿ ಸಾಮಾನ್ಯ ಟೆಂಡರ್ ಪ್ರಕ್ರಿಯೆಯ ಮುಖೇನ ವಾಹನಗಳ ಸೇವೆಯನ್ನು ಪಡೆದುಕೊಳ್ಳಲು ಸಾಧ್ಯವಾಗುವಂತೆ ಕೆ.ಟಿ.ಪಿ.ಪಿ.ಅಧಿನಿಯಮದ ನಿಯಮ 4(ಜಿ)ಗೆ ವೆಚ್ಚ 12/2014 ದಿನಾಂಕ: 16-05-2014ರಲ್ಲಿ ಸರ್ಕಾರವು ವಿನಾಯಿತಿಯನ್ನು ನೀಡಿರುತ್ತದೆ.

5) ಈ ವಿಭಾಗದ ಮುಖ್ಯಸ್ಥರಾದ ಜಂಟಿ ಆಯುಕ್ತರು (ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5, ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಅನ್ವಯ **ಟೆಂಡರ್ ಸ್ವೀಕೃತಿ ಮತ್ತು ಒಪ್ಪಿಗೆ ಅಧಿಕಾರಿ** (Tender inviting and other accepting Authority) ಆಗಿರುತ್ತಾರೆ.

6) ಸಾಂಪ್ರದಾಯಿಕ ಟೆಂಡರ್ ಪ್ರಕ್ರಿಯೆಗೆ ಅನುಗುಣವಾಗಿ ದಿನಪತ್ರಿಕೆಯೊಂದರಲ್ಲಿ ಅಂದರೆ ಕನ್ನಡಪ್ರಭ ಪತ್ರಿಕೆ ಹಾಗೂ ಇಲಾಖೆ / ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

7) ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು/ವಿವರಗಳು.